# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಮಲ್ಲೇಶ್ವರಂ, ಬೆಂಗಳೂರು

ಸಂಖ್ಯೆ: ಸಿಎಸ್1/ಎಸ್.ಎಸ್.ಎಲ್.ಸಿ/ಮಾರ್ಚ್–2024/01/2023–24 ದಿನಾಂಕ: 10–10–2023

**– ಸುತ್ತೋಲೆ –**

ವಿಷಯ: ಮಾರ್ಚ್–2024 ರಲ್ಲಿ ನಡೆಯುವ ಎಸ್.ಎಸ್.ಎಲ್.ಸಿ ಪರೀಕ್ಷೆ – 1 ಕ್ಕೆ ವಿದ್ಯಾರ್ಥಿಗಳ ನೋಂದಣಿ ಮಾಹಿತಿಗಳನ್ನು ಮಂಡಲಿಯ ಜಾಲತಾಣದ ಶಾಲಾ ಲಾಗಿನ್‌ನಲ್ಲಿ ಅಪ್‌ಲೋಡ್ ಮಾಡುವ ಬಗ್ಗೆ.

ಉಲ್ಲೇಖ:1 ಮಂಡಲಿಯ ಮಾರ್ಗಸೂಚಿ ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ./ಅಧಿ/ಮಾರ್ಚ್–24/14/2023–24 ದಿನಾಂಕ: 04–10–2023

2 ಸರ್ಕಾರದ ಆದೇಶ ಸಂಖ್ಯೆ: ಇಪಿ 203 ಎಸ್‌ಎಲ್‌ಬಿ 2023 ದಿನಾಂಕ: 21–09–2023

*******

ಸರ್ಕಾರದ ಆದೇಶ ಸಂಖ್ಯೆ: ಇಪಿ 203 ಎಸ್‌ಎಲ್‌ಬಿ 2023 ದಿನಾಂಕ: 21–09–2023 ರನ್ವಯ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯ ವತಿಯಿಂದ 2023–24ನೇ ಸಾಲಿನಿಂದ ಜಾರಿಗೆ ಬರುವಂತೆ ಎಸ್.ಎಸ್.ಎಲ್.ಸಿ. ಪರೀಕ್ಷೆಗಳನ್ನು ಪರೀಕ್ಷೆ–1, ಪರೀಕ್ಷೆ–2 ಮತ್ತು ಪರೀಕ್ಷೆ–3 ಎಂಬ ಹೆಸರಿನಲ್ಲಿ ನಡೆಸಲಾಗುವುದು.

ಮಾರ್ಚ್–2024 ರಲ್ಲಿ ನಡೆಯುವ ಎಸ್.ಎಸ್.ಎಲ್.ಸಿ. ಪರೀಕ್ಷೆ – 1 ಕ್ಕೆ ಅರ್ಹ ಅಭ್ಯರ್ಥಿಗಳ ನೋಂದಣಿ ಮಾಹಿತಿಗಳನ್ನು ಮಂಡಲಿಯ ಜಾಲತಾಣದ (https://kseab.karnataka.gov.in) ಶಾಲಾ ಲಾಗಿನ್‌ನಲ್ಲಿ ಪಡೆಯಲು ಯೋಜಿಸಲಾಗಿದೆ. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳ ಮುಖ್ಯಸ್ಥರು ತಮ್ಮ ಶಾಲೆಯ (ಶಾಲಾ ಅಭ್ಯರ್ಥಿ, ಖಾಸಗಿ ಅಭ್ಯರ್ಥಿ, ಪುನರಾವರ್ತಿತ ಶಾಲಾ ಹಾಗೂ ಖಾಸಗಿ ಅಭ್ಯರ್ಥಿಗಳು) ಮಾರ್ಚ್–2024 ರ ಎಸ್.ಎಸ್.ಎಲ್.ಸಿ. ಪರೀಕ್ಷೆ – 1 ನ್ನು ತೆಗೆದುಕೊಳ್ಳುವ ವಿದ್ಯಾರ್ಥಿಗಳ ವಿವರಗಳನ್ನು ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡುವಂತೆ ಈ ಮೂಲಕ ಆದೇಶಿಸಿದೆ.

1) ಈ ನೋಂದಣಿ ಕಾರ್ಯಕ್ಕೆ **ದಿನಾಂಕ: 10–10–2023 ರಿಂದ 04–11–2023 ರವರೆಗೆ** ಮಾಹಿತಿಯನ್ನು ಅಪ್‌ಲೋಡ್ ಮಾಡಲು ಕಾಲಾವಕಾಶವನ್ನು ನಿಗದಿಪಡಿಸಲಾಗಿದೆ.

2) ಮಾಹಿತಿಗಳನ್ನು ಅಪ್‌ಲೋಡ್ ಮಾಡಲು ಬಳಸಬೇಕಾದ ಫಾರಂನ್ನು ಮಂಡಲಿಯ ಜಾಲತಾಣ https://kseab.karnataka.gov.in ರಲ್ಲಿನ ಶಾಲಾ ಲಾಗಿನ್ ಮೂಲಕ ತಲುಪಬಹುದಾಗಿದೆ.

3) ಮುಖ್ಯಶಿಕ್ಷಕರು **ಮಂಡಲಿಯ ಶಾಲಾ ಲಾಗಿನ್‌ನಲ್ಲಿ** ಮಂಡಲಿಯ ವತಿಯಿಂದ ಈಗಾಗಲೇ ನೀಡಿರುವ **Username and Password** ಬಳಸಿ ಆನ್‌ಲೈನ್‌ನಲ್ಲಿ ನೋಂದಣಿ ಕಾರ್ಯ ಮಾಡಬಹುದಾಗಿದೆ.

4) ಮಾರ್ಚ್–2024 ರ ಪರೀಕ್ಷೆ –1 ಕ್ಕೆ ಈ ಕೆಳಕಂಡ ಅಭ್ಯರ್ಥಿಗಳನ್ನು ನೋಂದಾಯಿಸಬೇಕಾಗಿರುತ್ತದೆ.

- ಶಾಲಾ ವಿದ್ಯಾರ್ಥಿಗಳ (CCERF) - ಪೂರ್ಣ ಮಾಹಿತಿ ಹಾಗೂ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡಬೇಕು.
- ಖಾಸಗಿ ವಿದ್ಯಾರ್ಥಿಗಳ (CCEPF) - ಪೂರ್ಣ ಮಾಹಿತಿ ಹಾಗೂ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡಬೇಕು.
- **ಮಾರ್ಚ್ – 2022 ಹಾಗೂ ಮಾರ್ಚ್ – 2023 ರ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರುವ ಆದರೆ, ಫಲಿತಾಂಶವನ್ನು ಉತ್ತಮಪಡಿಸಿಕೊಳ್ಳಲು ಇಚ್ಛಿಸುವ ಅಭ್ಯರ್ಥಿಗಳನ್ನೂ ಸಹ ಆನ್‌ಲೈನ್‌ನಲ್ಲಿಯೇ ಶಾಲಾ ಲಾಗಿನ್ ಮೂಲಕ ನೋಂದಣಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಈ ವಿದ್ಯಾರ್ಥಿಗಳ ಇತ್ತೀಚಿನ ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡಬೇಕು ಮತ್ತು ಮೂಲ ಅಂಕಪಟ್ಟಿಯನ್ನು ಮಂಡಲಿಗೆ ದಿನಾಂಕ: 10–11–2023 ರೊಳಗೆ ಸಲ್ಲಿಸುವುದು.**

- ಸೆಪ್ಟೆಂಬರ್–2021 ರಿಂದ ಜೂನ್–2023 ರವರೆಗಿನ (CCERR /CCEPR) ಮತ್ತು ಏಪ್ರಿಲ್ 2003 ರಿಂದ ಜೂನ್ 2010 ರವರೆಗಿನ (NSR/NSPR) ಪುನರಾವರ್ತಿತ ಶಾಲಾ ಅಭ್ಯರ್ಥಿಗಳ ಹಾಗೂ ಪುನರಾವರ್ತಿತ ಖಾಸಗಿ ಅಭ್ಯರ್ಥಿಗಳ ನೋಂದಣಿ ಸಂಖ್ಯೆಯನ್ನು ನಮೂದಿಸಿದರೆ ಡೇಟಾ Auto Fetch ಆಗುತ್ತದೆ. ಪೋಷಕರ ಮೊಬೈಲ್ ಸಂಖ್ಯೆಯನ್ನು ನಮೂದಿಸಿ, ಭಾವಚಿತ್ರ ಮತ್ತು ಸಹಿಯನ್ನು ಅಪ್‌ಲೋಡ್ ಮಾಡಬೇಕು.
- **2002** ಮತ್ತು ಅದಕ್ಕಿಂತ ಹಿಂದಿನ ವರ್ಷಗಳಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅನುತ್ತೀರ್ಣರಾದ NSR ಮತ್ತು NSPR ಪುನರಾವರ್ತಿತ ಅಭ್ಯರ್ಥಿಗಳ ವಿವರಗಳನ್ನು ಶಾಲೆಯಲ್ಲಿ ಲಭ್ಯವಿರುವ ಎಂ.ಎಸ್.ಎ. ಫಾರಂ ಬಳಸಿ (ಶಾಲೆಯಲ್ಲಿ ಲಭ್ಯವಿಲ್ಲದಿದ್ದಲ್ಲಿ ಸಂಬಂಧಿಸಿದ ವಿಭಾಗೀಯ ಕಛೇರಿಯಿಂದ ದ್ವಿತೀಯ ಪ್ರತಿ ಎಂ.ಎಸ್.ಎ.ಯನ್ನು ಪಡೆಯುವುದು) ಪರೀಕ್ಷಾ ಶುಲ್ಕವನ್ನು ಮಂಡಲಿಯ NEFT Challan ಮೂಲಕ ಪಾವತಿಸಿ ಮೂಲ ಚಲನ್ ಪ್ರತಿ, ಎಂ.ಎಸ್.ಎ. ಮತ್ತು ನಾಮಿನಲ್ ರೋಲ್‌ನೊಂದಿಗೆ ಮಂಡಲಿಗೆ **ದಿನಾಂಕ: 10–11–2023** ರೊಳಗೆ ಸಲ್ಲಿಸುವುದು.

5) **ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಸಂಬಂಧಿಸಿದಂತೆ ಶಾಲಾ ವಿದ್ಯಾರ್ಥಿಗಳ ಬಹುತೇಕ ಮಾಹಿತಿಗಳನ್ನು SATS ನ ಡೇಟಾಬೇಸ್‌ನಿಂದ ಪಡೆಯುತ್ತಿರುವುದರಿಂದ ಅಭ್ಯರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ, ಪ್ರವರ್ಗ, ಧರ್ಮ, ಲಿಂಗ ಮತ್ತು ಮಾಧ್ಯಮ ಇವುಗಳಲ್ಲಿ ಯಾವುದೇ ತಿದ್ದುಪಡಿಗಳು ಇದ್ದಲ್ಲಿ, ಮಂಡಲಿಯ ಜಾಲತಾಣದಲ್ಲಿ ನೇರವಾಗಿ ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ. ಮೊದಲು ಎಸ್.ಎ.ಟಿ.ಎಸ್ ಡೇಟಾಬೇಸ್‌ನಲ್ಲಿ ತಿದ್ದುಪಡಿ ಮಾಡಿ ನಂತರ ಮಂಡಲಿಯ ಶಾಲಾ ಲಾಗಿನ್‌ನಲ್ಲಿ ಪರೀಕ್ಷಾ ನೋಂದಣಿ ಮಾಡುವುದು.**

6) ಆನ್‌ಲೈನ್ ಡೇಟಾ ಎಂಟ್ರಿ ಪ್ರಾರಂಭಿಸುವ ಮೊದಲು ಶಾಲೆಯ ಪ್ರತಿ ವಿದ್ಯಾರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಭಾವಚಿತ್ರ **(20-80kb)** ಹಾಗೂ ಸಹಿಯನ್ನು **(20-50kb) jpeg format** ನಲ್ಲಿ ಅವರ ಎಸ್.ಎ.ಟಿ.ಎಸ್. ನೋಂದಣಿ ಸಂಖ್ಯೆಯ ಅನುಕ್ರಮದಲ್ಲಿ ಸೇವ್ ಮಾಡಿಟ್ಟುಕೊಳ್ಳುವುದು.

   **ಉದಾ:–** ಅಭ್ಯರ್ಥಿಯ SATS ಸಂಖ್ಯೆಯು 012345678 ಆಗಿದ್ದಲ್ಲಿ ಭಾವಚಿತ್ರವನ್ನು ಸ್ಕ್ಯಾನ್ ಮಾಡಿ P012345678 ಎಂದೂ, ಸಹಿಯನ್ನು ಸ್ಕ್ಯಾನ್ ಮಾಡಿ S012345678 ಎಂದು soft copy ಗಳನ್ನು ಸೇವ್ ಮಾಡಿಟ್ಟುಕೊಳ್ಳುವುದು. ಇದೇ ರೀತಿ ಖಾಸಗಿ ಅಭ್ಯರ್ಥಿಗಳ ಭಾವಚಿತ್ರ ಹಾಗೂ ಸಹಿಗಳನ್ನು ಆ ಅಭ್ಯರ್ಥಿಗಳ ಪೂರ್ಣ ಹೆಸರಿನೊಂದಿಗೆ ಸೇವ್ ಮಾಡಿಟ್ಟುಕೊಳ್ಳಬಹುದಾಗಿದೆ.

7) **ಶಾಲಾ ವಿದ್ಯಾರ್ಥಿಗಳ (CCERF) ನೋಂದಣಿ ಪ್ರಾರಂಭಿಸುವ ಮೊದಲು ಶಾಲೆಯಲ್ಲಿ ಬೋಧಿಸಲಾಗುವ ಭಾಷಾ ಸಂಯೋಜನೆಯನ್ನು ಆಯ್ಕೆ ಮಾಡಿ ಫ್ರೀಜ್ ಮಾಡಲು ಅವಕಾಶ ಕಲ್ಪಿಸಲಾಗಿದೆ. ಶಾಲೆಯಲ್ಲಿ ಬೋಧಿಸಲ್ಪಡುತ್ತಿರುವ ಒಂದು ಅಥವಾ ಒಂದಕ್ಕಿಂತ ಹೆಚ್ಚಿನ ಭಾಷಾ ಸಂಯೋಜನೆಗಳನ್ನು ಆಯ್ಕೆ ಮಾಡಿ ಫ್ರೀಜ್ ಮಾಡಿದ ನಂತರವಷ್ಟೇ ಶಾಲಾ ವಿದ್ಯಾರ್ಥಿಗಳ ನೋಂದಣಿ ಪ್ರಕ್ರಿಯೆ ಅನುವಾಗುವಂತೆ ವ್ಯವಸ್ಥೆ ಮಾಡಲಾಗಿದೆ.**

8) ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿರುವ ವಿದ್ಯಾರ್ಥಿಗಳ **Aadhar linked** ಬ್ಯಾಂಕ್ ಖಾತೆಯ ವಿವರಗಳನ್ನು ನಮೂದಿಸುವುದು ಕಡ್ಡಾಯವಾಗಿರುತ್ತದೆ. ಹಿಂದುಳಿದ ವರ್ಗಕ್ಕೆ (OBC) ಸೇರಿದ ವಿದ್ಯಾರ್ಥಿಗಳು ಶುಲ್ಕ ವಿನಾಯಿತಿ ಪಡೆಯಬೇಕಾದಲ್ಲಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳ RD NUMBER ನ್ನು ನಮೂದಿಸುವುದು ಕಡ್ಡಾಯವಾಗಿರುತ್ತದೆ. **RD NUMBER ನಮೂದಿಸಿದ ನಂತರ ಮುಖ್ಯ ಶಿಕ್ಷಕರು ವಿದ್ಯಾರ್ಥಿಯ ಪ್ರವರ್ಗದ ಮಾಹಿತಿ ಸರಿಯಾಗಿರುವುದನ್ನು ಖಚಿತಪಡಿಸಿಕೊಳ್ಳಬಹುದಾಗಿದೆ.**

9) ವಿದ್ಯಾರ್ಥಿಗಳ ಮಾಹಿತಿಗಳನ್ನು ಆನ್‌ಲೈನ್‌ನಲ್ಲಿ ನೋಂದಾಯಿಸಿದ ನಂತರ ಪ್ರತಿ ವಿದ್ಯಾರ್ಥಿಯ ಮಾಹಿತಿಗಳನ್ನು ವೈಯಕ್ತಿಕವಾಗಿ ಮತ್ತು ಶಾಲೆಯ ಕ್ರೋಢೀಕೃತ ಮಾಹಿತಿಯನ್ನು ನಾಮಿನಲ್ ರೋಲ್‌ನಲ್ಲಿ ಪರಿಶೀಲಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

10) ಉಲ್ಲೇಖ (1)ರಲ್ಲಿ ನಿಗದಿಪಡಿಸಿರುವಂತೆ ಹೊಸ ಖಾಸಗಿ ಅಭ್ಯರ್ಥಿಗಳ ನೋಂದಣಿ ಶುಲ್ಕವನ್ನು (ರೂ.225/–) ಶಾಲಾ ಹಂತದಲ್ಲಿಯೇ ಸಂಗ್ರಹಿಸಬೇಕಾಗಿರುವುದರಿಂದ, ಈ ಶುಲ್ಕವನ್ನೂ ಸಹ ಪರೀಕ್ಷಾ ಶುಲ್ಕದ ಜೊತೆಯಲ್ಲಿಯೇ ಮಂಡಲಿಗೆ ಭರಿಸುವಂತೆ ಆನ್‌ಲೈನ್‌ನಲ್ಲಿಯೇ ಚಲನ್ ಸೃಜಿಸಲಾಗುವುದು.

11) ಮುಖ್ಯ ಶಿಕ್ಷಕರು ಆನ್‌ಲೈನ್‌ನಲ್ಲಿ ಎಲ್ಲಾ ವಿದ್ಯಾರ್ಥಿಗಳ ಮಾಹಿತಿಯನ್ನು ಗಣಕೀಕರಿಸಿದ ನಂತರ ವಿದ್ಯಾರ್ಥಿಗಳ ಶುಲ್ಕವನ್ನು ಮಂಡಲಿಗೆ ಪಾವತಿಸಲು ನೋಂದಣಿಗೆ ನಿಗದಿಪಡಿಸಲಾದ ಕೊನೆಯ ದಿನಾಂಕದ ನಂತರ ಮಂಡಲಿಯ ಶಾಲಾ ಲಾಗಿನ್‌ನಲ್ಲಿ ಸೃಜಿಸಲಾಗುವ ಆನ್‌ಲೈನ್ ಚಲನ್‌ನ್ನು ಡೌನ್‌ಲೋಡ್ ಮಾಡಿ ಮುದ್ರಿಸಿಕೊಂಡು **ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ (ಈ ಹಿಂದಿನ ಕಾರ್ಪೋರೇಷನ್ ಬ್ಯಾಂಕ್)** ರಾಜ್ಯದ ಯಾವುದೇ ಶಾಖೆಯಲ್ಲಿ ಶುಲ್ಕ ಪಾವತಿಸುವುದು. **ಶಾಲಾ ಲಾಗಿನ್‌ನಲ್ಲಿ ಸೃಜಿಸಲಾಗುವ ಚಲನ್‌ನ್ನು ಬಳಸಿಯೇ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ನೆಫ್ಟ್ ಚಲನ್ ಬಳಸಿ ಶುಲ್ಕ ಪಾವತಿಸಬಾರದು, ಪಾವತಿಸಿದಲ್ಲಿ ಅಂತಹ ಶುಲ್ಕ ಪಾವತಿಯನ್ನು ಪರಿಗಣಿಸಲಾಗುವುದಿಲ್ಲ.**

12) ಪ್ರಸ್ತುತ ಆನ್‌ಲೈನ್ ಮೂಲಕ ಭರ್ತಿ ಮಾಡಲಾದ ವಿದ್ಯಾರ್ಥಿಗಳ ವಿವರಗಳು ಅಂಕಪಟ್ಟಿ ಹಾಗೂ ವರ್ಗಾವಣೆ ಪತ್ರಗಳಲ್ಲಿ ನಮೂದಾಗುವುದರಿಂದ ಯಾವುದೇ ತಪ್ಪುಗಳು ಆಗದಂತೆ ಎಚ್ಚರಿಕೆ ವಹಿಸಲು ಸೂಚಿಸಿದೆ. ನಿಗದಿತ ದಿನಾಂಕದ ನಂತರ ನೋಂದಣಿ ಮಾಹಿತಿಗಳನ್ನು ಫ್ರೀಜ್ ಮಾಡುವುದರಿಂದ ಅದರ ನಂತರ ವಿದ್ಯಾರ್ಥಿಗಳ ವಿವರಗಳಲ್ಲಿ ಯಾವುದೇ ಬದಲಾವಣೆ ಮಾಡಲು ಅವಕಾಶ ನೀಡಲಾಗುವುದಿಲ್ಲ.

13) ಸದರಿ ಪರೀಕ್ಷಾ ನೋಂದಣಿಗೆ ಸಂಬಂಧಿಸಿದಂತೆ ಯಾವುದೇ ಸಂದೇಹಗಳಿದ್ದಲ್ಲಿ Screenshot ಸಹಿತ User Manual ಹಾಗೂ FAQ ಗಳನ್ನು ಮಂಡಲಿಯ ಜಾಲತಾಣದ ಶಾಲಾ ಲಾಗಿನ್‌ನಲ್ಲಿ ಒದಗಿಸಲಾಗಿದ್ದು, ಅವುಗಳ ಸದುಪಯೋಗ ಪಡೆಯಬಹುದಾಗಿದೆ. ಅಲ್ಲದೇ, ದಿನಾಂಕ: **10–10–2023** ರಿಂದ **04–11–2023** ರವರೆಗೆ ಕಛೇರಿ ಕೆಲಸದ ದಿನಗಳಂದು ಮುಖ್ಯಶಿಕ್ಷಕರು ಮಂಡಲಿಯ ಸಹಾಯವಾಣಿ ಸಂಖ್ಯೆ: **080-23310075, 080-23310076** ಗಳಿಗೆ ಕರೆ ಮಾಡಿ ಪರೀಕ್ಷಾ ನೋಂದಣಿಗೆ ಸಂಬಂಧಿಸಿದ ಸಂದೇಹಗಳನ್ನು ಪರಿಹರಿಸಿಕೊಳ್ಳಬಹುದು.

**ಮಂಡಲಿಯ ವತಿಯಿಂದ ಮುಖ್ಯಶಿಕ್ಷಕರಿಗೆ ನೀಡಲಾಗಿರುವ Username ಗೆ ಸಂಬಂಧಿಸಿದ Password ನ್ನು ಗೌಪ್ಯವಾಗಿಟ್ಟುಕೊಳ್ಳುವುದು.**

10/10/2023

(ಗೋಪಾಲಕೃಷ್ಣ ಹೆಚ್.ಎನ್.)
ನಿರ್ದೇಶಕರು(ಪರೀಕ್ಷೆಗಳು)

**ಅಗತ್ಯ ಕ್ರಮಕ್ಕಾಗಿ :**

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ
2) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ

**ಪ್ರತಿಗಳನ್ನು ಗೌರವಪೂರ್ವಕವಾಗಿ ಸಲ್ಲಿಸಿದೆ:**

1) ಮಾನ್ಯ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು
2) ಮಾನ್ಯ ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಬೆಂಗಳೂರು
3) ಮಾನ್ಯ ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ
4) ಮಾನ್ಯ ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರ್ಗಿ
5) ನಿರ್ದೇಶಕರು, ಪ್ರೌಢ ಶಿಕ್ಷಣ, ಮಾನ್ಯ ಆಯುಕ್ತರ ಕಛೇರಿ, ಬೆಂಗಳೂರು
6) ವಿಭಾಗೀಯ ಸಹನಿರ್ದೇಶಕರು, ಬೆಂಗಳೂರು, ಮೈಸೂರು, ಬೆಳಗಾಂ ಹಾಗೂ ಕಲಬುರಗಿ ವಿಭಾಗಗಳು